• ಕುಟುಂಬವು ಕುಟುಂಬದ ಮುಖ್ಯಸ್ಥನ ಭಾವಚಿತ್ರ ಅಥವಾ ಕುಟುಂಬ ಸದಸ್ಯರ ಹೆಸರು ಇರುವ ಬಿಪಿಎಲ್ ಕಾಡ್‌ನ್ನು ಕಡ್ಡಾಯವಾಗಿ ಹೊಂದಿರಬೇಕು.

• ಮಗುವಿನ ಜನನ ನೋದಣಿ ಪ್ರಮಾಣ ಪತ್ರವನ್ನು ಹೊಂದಿರಬೇಕು.

• ಆರೋಗ್ಯ ಇಲಾಖೆಯ ಕಾರ್ಯಕ್ರಮದಂತೆ ರೋಗನಿರೋಧಕ ಚುಚ್ಚುಮದ್ದನ್ನು ಹಾಕಿಸಿರಬೇಕು.

• ಕುಟುಂಬದ ಎರಡು ಹೆಣ್ಣುಮಕ್ಕಳು ಮಾತ್ರ ಈ ಸೌಲಭ್ಯವನ್ನು ಪಡೆಯಲು ಸೀಮಿತಗೊಳಿಸಲಾಗಿದೆ.

ಈ ಕುಟುಂಬದ ಮಗುವಿನ ತಾಯಿ ಅಥವಾ ತಂದೆ ಯಾರಾದರೊಬ್ಬರು ಶಾಶ್ವತ ಕುಟುಂಬ ಯೋಜನೆಯ ಪದ್ಧತಿಯನ್ನು ಅಳವಡಿಸಿ ಕೊಂಡಿದ್ದು, ಒಟ್ಟು ಮೂರು ಮಕ್ಕಳನ್ನು ಮೀರಿರಕೂಡದು.

ಊ) ಹೌದು,

ಋ) ಯೋಜನೆಯು ಬಿಪಿಎಲ್ ಕಾರ್ಡ್ ಹೊಂದಿದವರಿಗೆ ಮಾತ್ರ ಅನ್ವಯಿಸುತ್ತದೆ.

• ಒಂದು ವೇಳೆ ಅರ್ಹ ಫಲಾನುಭವಿಗಳು ಬಿಟ್ಟು ಹೋಗಿದ್ದಲ್ಲಿ ಅವರಿಗೆ ಬಿಪಿಎಲ್ ಕಾರ್ಡ್ ಒದಗಿಸಲು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಗೆ ಕೋರಲಾಗಿದೆ.

ಪ್ರಥಮ ದರ್ಜೆ ಕಾಲೇಜುಗಳ ಮಂಜೂರಾತಿ

298 : (390)

ಶ್ರೀ ಖಾದರ್ ಯು.ಟಿ.

ಅ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಪ್ರಥಮ ದರ್ಜೆ ಕಾಲೇಜುಗಳ ಸ್ಥಾಪನೆಗೆ ಅನುಮತಿ ನೀಡಲಾಗಿದೆ (ವಿವರ ಒದಗಿಸುವುದು);

ಆ) ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಮಂಗಳೂರು ವಿಧಾನಸಭಾ ಕ್ಷೇತ್ರ ಯಾವ ಪ್ರದೇಶದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಲಾಗುವುದು?

ಶ್ರೀ. ಸಿ.ಟಿ.ರವಿ
(ಮಾನ್ಯ ಉನ್ನತ ಶಿಕ್ಷಣ ಸಚಿವರು)

1) 2010–11ನೇ ಸಾಲಿನಲ್ಲಿ ಯಾವುದೇ ಕಾಲೇಜನ್ನು ಪ್ರಾರಂಭಿಸಿರುವುದಿಲ್ಲ.

2) 2011–12ನೇ ಸಾಲಿನಲ್ಲಿ ತುಮಕೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ತುಮಕೂರು ನಗರದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲಾಗಿದೆ.

3) 2012–13ನೇ ಸಾಲಿನಲ್ಲಿ ಪಡುವಲಹಿಪ್ಪೆ ಸರ್ಕಾರಿ ಕಾನೂನು ಕಾಲೇಜನ್ನು ಪರಿವರ್ತಿಸಿ ತಿಳುವಳ್ಳಿ ಹಾನಗಲ್ ತಾಲ್ಲೂಕು ಹಾವೇರಿ ಜಿಲ್ಲೆ ಇಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲಾಗಿದೆ.

ಆ) ಬಂದಿದೆ.

ಇ) ವಿದ್ಯಾರ್ಥಿಗಳ ಸಂಖ್ಯೆ, ಜಮೀನಿನ ಲಭ್ಯತೆ ಹಾಗೂ ಅನುದಾನದ ಲಭ್ಯತೆ ಅನುಸಾರ ಮಂಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಅಗತ್ಯವಿರುವ ಕಡೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಪ್ರಥಮ ದರ್ಜೆ ಕಾಲೇಜಿನ ನಿರ್ಮಾಣ
313 : (385)
ಶ್ರೀ ನರೇಂದ್ರಬಾಬು ನೆ.ಲ.

ಅ) ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ವಾರ್ಡ್: ನಂ.67–ನಾಗಪುರದಲ್ಲಿ ಜಿ.ಡಿ.ನಾಯ್ಡು ಕಾಂಪೌಂಡಿನಲ್ಲಿ ಪ್ರಥಮ ದರ್ಜೆ ಕಾಲೇಜಿನ ನಿರ್ಮಾಣ ಕಾರ್ಯ ಇನ್ನೂ ಪ್ರಾರಂಭವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕಾಮಗಾರಿ ಪ್ರಾರಂಭವಾಗದೇ ಇರಲು ಕಾರಣಗಳೇನು?

ಇ) ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು, ಟೆಂಡರ್ ಪ್ರಕ್ರಿಯೆ ಯಾವ ಹಂತದಲ್ಲಿದೆ;

ಈ) ಟೆಂಡರ್ ಪ್ರಕ್ರಿಯೆ ಮುಗಿದಿದ್ದಲ್ಲಿ ಗುತ್ತಿಗೆದಾರರ ಹೆಸರು ಮತ್ತು ವಿಳಾಸ ನೀಡುವುದು, ಕಟ್ಟಡ ಕಾಮಗಾರಿಗೆ ಆಯವ್ಯಯದಲ್ಲಿ ಎಷ್ಟು ಅನುದಾನವನ್ನು ಮೀಸಲಿಡಲಾಗಿದೆ (ವಿವರ ನೀಡುವುದು)